**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 74/2020**

**ಚಾ.ಸಾ. :-2**
**ಪ್ರಾ.ಸಾ. :-1**

| | |
|---|---|
| ಹೆಸರು | : ಸಂದೀಪ್ |
| ತಂದೆಯ ಹೆಸರು | : ಲೇಟ್ ಗೋಪಾಲ್ |
| ವಯಸ್ಸು | : 37 ವರ್ಷ |
| ಉದ್ಯೋಗ | : ಆಟೋ ಚಾಲಕ |
| ವಾಸಸ್ಥಳ | : ಶ್ರೀರಂಗಪಟ್ಟಣ |

**ಪ್ರಮಾಣೀಕರಿಸಲಾದ ದಿನಾಂಕಃ- 15.09.2025.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಚಾ.ಸಾ-1 ಪರಿಚಯವಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಅಪಘಾತವನ್ನು ನೋಡಿರುವುದಿಲ್ಲ. ಅಪಘಾತವು ಹೇಗೆ, ಯಾವ ರೀತಿ ಹಾಗೂ ಯಾರ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆ ಎಂಬುದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗ ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎಲ್ಲಿ, ಯಾವಾಗ, ಯಾವ ಕಾರಣಕ್ಕಾಗಿ ಮಾಡಿರುತ್ತೇನೆಂದು ಗೊತ್ತಿಲ್ಲ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ದಿನಾಂಕಃ 07.11.2019 ರಂದು ಮಧ್ಯಾಹ್ನ 3.30 ರ ಸಮಯದಲ್ಲಿ ಬೆಂಗಳೂರು-ಮೈಸೂರು ಹೆದ್ದಾರಿಯ ಎಂ.ಕೆ.ಆಯಿಲ್ ಫ್ಯಾಕ್ಟರಿಯ ಸರ್ಕಲ್ ಬಳಿ ಇದ್ದಾಗ ನನ್ನ ಸಮಕ್ಷಮ ಚಾ.ಸಾ-1 ರವರು ಅವರ ಪತ್ನಿಯೊಂದಿಗೆ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದಾಗ ಈ ದಿನ ನ್ಯಾಯಾಲಯದ ಮುಂದಿರುವ ಆರೋಪಿ ಲಾರಿಯಿಂದ ಗುದ್ದಿ ಅಪಘಾತಪಡಿಸಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಆರೋಪಿಯು ತನ್ನ ಲಾರಿಯನ್ನು ಅಜಾಗರೂಕತೆಯಿಂದ ಹಾಗೂ ಅತಿವೇಗವಾಗಿ ಚಾಲನೆ ಮಾಡಿ ಡಿಕ್ಕಿಪಡಿಸಿರುತ್ತಾರೆಂದು, ಸದರಿ ಅಪಘಾತವನ್ನು ನಾನು ನೇರವಾಗಿ ನೋಡಿರುತ್ತೇನೆಂದು ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಗಾಯಾಳುವನ್ನು ಆ್ಯಂಬುಲೆನ್ಸ್ ಮೂಲಕ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇನೆ ಎಂದರೆ ಸುಳ್ಳು.

ದಿನಾಂಕಃ 08.11.2019 ರಂದು ಪೊಲೀಸರು ನನ್ನ ಸಮಕ್ಷಮ ಸದರಿ ಮಹಜರ್ ಬರೆದಿದ್ದು, ಆ ಸಮಯದಲ್ಲಿ ಸ್ಥಳದಿಂದ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-1 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ ಹಾಗೂ ಓದಿ ನೋಡಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಸಂಪೂರ್ಣ ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ ಎಂದು ನಿರಾಕರಿಸಿದ ಮೇರೆಗೆ ಹೇಳಿಕೆಯನ್ನು ನಿಪಿ-2 ಎಂದು

ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

***<u>ಪಾಟೀ ಸವಾಲು:</u> ಆರೋಪಿ ಹಾಜರಾಗಿದ್ದು, ಆರೋಪಿ ಪರ ವಕೀಲರು ಗೈರು ಹಾಜರಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.***

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**